ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ: 14ನೇ ಡಿಸೆಂಬರ್, 2020

ಮುಖ್ಯ ಗುರುಗಳಿಗೆ ವಿಶೇಷ ಭತ್ಯೆಯಲ್ಲಿ ಆಗಿರುವ ಅನ್ಯಾಯ ಸರಿಪಡಿಸುವ ಬಗ್ಗೆ

ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ):-

625(733) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ:-

ಸರ್ಕಾರಿ ಮತ್ತು ಅನುದಾನಿತ ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮುಖ್ಯ ಗುರುಗಳಿಗೆ ರೂಪಾಯಿ 500/- ವಿಶೇಷ ಭತ್ಯೆ ನೀಡದೇ ಇರುವುದರಿಂದ ಸೇವೆಯ ಉದ್ದಕ್ಕೂ ಒಂದು ವೇತನ ಸಿಗದೇ ವಂಚಿತರಾಗಿದ್ದು ಮತ್ತು ಕಿರಿಯ ನೌಕರರಿಗಿಂತ ಕಡಿಮೆ ಸಂಬಳ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಜರುಗಿಸಲಾಗುವ ಕ್ರಮವೇನು ?